ಅ) *1991ರ ಜನಗಣತಿ ಆಧಾರದ ಮೇಲೆ ಚುನಾವಣೆಗಳನ್ನು ನಡೆಸುವ ಬಗ್ಗೆ ಸರ್ಕಾರ ಯೋಚಿಸಿದೆಯೇ? ಮತ್ತು 1991ರ ಜನಗಣತಿ ಆಧಾರದ ಮೇಲೆ ಚುನಾವಣಾ ಕ್ಷೇತ್ರಗಳನ್ನು ರಚಿಸಲಾಗುವುದೇ? ಅಥವಾ ಅವು ಈಗಿರುವ ಹಾಗೆಯೇ ಇರುತ್ತದೆಯೇ?*

ಆ) *ಸರ್ಕಾರವು ಚುನಾವಣೆಯನ್ನು ನಡೆಸದೇ ಇದ್ದರೆ ಸರ್ಕಾರದ ನಿಲುವೇನು?*

ಇ) *ನಾಮನಿರ್ದೇಶನ ಮಾಡುವ ಬಗ್ಗೆ ಸರ್ಕಾರವು ಏನಾದರೂ ಯೋಚಿಸಿದೆಯೇ?*

ಶ್ರೀಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು):

ಅ) ವಿಷಯವು ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ.

ಆ) ಅ)ನಲ್ಲಿ ನೀಡಿರುವ ಉತ್ತರದನ್ವಯ ಉದ್ಭವಿಸುವುದಿಲ್ಲ.

ಇ) ಇಲ್ಲ.

ಚನ್ನಪಟ್ಟಣ ತಾಲ್ಲೂಕಿನಲ್ಲಿರುವ ಕೊಳವೆ ಬಾವಿಗಳು.

1055-ಶ್ರೀ ಸಾದತ್ ಅಲಿ ಖಾನ್ (ಚನ್ನಪಟ್ಟಣ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *1989ಕ್ಕೂ ಮುಂಚೆ ಚನ್ನಪಟ್ಟಣ ತಾಲ್ಲೂಕಿನಲ್ಲಿ ಎಷ್ಟು ಕೊಳವೆ ಬಾವಿಗಳಿದ್ದವು?*

ಆ) *1989-90, 1990-91, 1991-92 ಇಲ್ಲಿಯವರೆಗೆ ಚನ್ನಪಟ್ಟಣ ತಾಲ್ಲೂಕಿನಲ್ಲಿ ಕೊರೆದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು? (ವಿವರಗಳನ್ನು ಒದಗಿಸುವುದು):*

ಇ) ಚನ್ನಪಟ್ಟಣ ತಾಲ್ಲೂಕಿನಲ್ಲಿ ಕೊಳವೆ ಬಾವಿಗಳನ್ನು ಮಂಜೂರು ಮಾಡುವ ಸಲುವಾಗಿ ಜಿಲ್ಲಾ ಪರಿಷತ್‌ನಲ್ಲಿ ಬಾಕಿ ಇರುವ ಅರ್ಜಿಗಳ ಸಂಖ್ಯೆ

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ) 868

ಆ)

1989-90	113
1990-91	65
1991-92	71
1992-93	62 (11 :92ರವರೆಗೆ)

(ವಿವರಗಳನ್ನು ಲಗತ್ತಿಸಿದೆ)

ಇ) ಯಾವುದೂ ಇಲ್ಲ.